ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 012.

ವೆಬ್‌ಸೈಟ್ https://cetonline.karnataka.gov.in/kea/ e-mail: keauthority-ka@nic.in

**ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.04/2025 (ಆರ್‌ಪಿಸಿ)** **ದಿನಾಂಕ: 08.10.2025**

**ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.05/2025 (ಕಲ್ಯಾಣ ಕರ್ನಾಟಕ)** **ದಿನಾಂಕ: 08.10.2025**

## ಅಧಿಸೂಚನೆ

ಈ ಕೆಳಕಂಡ ಸರ್ಕಾರಿ ಇಲಾಖೆ / ನಿಗಮ / ಸಂಸ್ಥೆಗಳಲ್ಲಿ ಉಳಿಕೆ ಮೂಲ ವೃಂದದಲ್ಲಿರುವ ಹಾಗೂ ಕಲ್ಯಾಣ ಕರ್ನಾಟಕ ವೃಂದದಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಸದರಿ ಹುದ್ದೆಗಳ ನೇಮಕಾತಿಗೆ ಅರ್ಹತೆ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗಬೇಕು.

| ಕ್ರ ಸಂ | ಇಲಾಖೆ / ಸಂಸ್ಥೆ / ನಿಗಮ | ವಿವಿಧ ಹುದ್ದೆಗಳ ಸಂಖ್ಯೆ | |
|---|---|---|---|
| | | ಮೂಲ ವೃಂದ | ಕಲ್ಯಾಣ ಕರ್ನಾಟಕ ವೃಂದ |
| 1. | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ | 18 | 07 |
| 2. | ಕರ್ನಾಟಕ ಸೋಪ್ಸ್ ಆ್ಯಂಡ್ ಡಿಟರ್ಜೆಂಟ್ಸ್ ಲಿಮಿಟೆಡ್ | 07 | 14 |
| 3. | ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ | 40 | 04 |
| 4. | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ | 63 | 253 |
| 5. | ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ | 19 | – |
| 6. | ಕೃಷಿ ಮಾರಾಟ ಇಲಾಖೆ | 180 | – |
| 7. | ತಾಂತ್ರಿಕ ಶಿಕ್ಷಣ ಇಲಾಖೆ | 50 | 43 |
| 8. | ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) | 10 | – |
| | **ಒಟ್ಟು** | **387** | **321** |

- **ಆನ್‌ಲೈನ್ ಅರ್ಜಿ ಸಲ್ಲಿಸಲು ದಿನಾಂಕ 09-10-2025 ರಿಂದ 01-11-2025 ರ ವರೆಗೆ ಅವಕಾಶ ನೀಡಲಾಗಿದೆ.**
- ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ ಸೂಚನೆಗಳು, **ಅಗತ್ಯ ಅರ್ಹತೆ ವಿವರ, ವಯೋಮಿತಿ, ಶೈಕ್ಷಣಿಕ ಅರ್ಹತೆ, ಅರ್ಜಿ ಸಲ್ಲಿಸುವ ವಿಧಾನ, ಶುಲ್ಕ, ಸ್ಪರ್ಧಾತ್ಮಕ ಪರೀಕ್ಷೆಯ ವಿಷಯಗಳು, ಪ್ರವರ್ಗವಾರು ಮತ್ತು ಹುದ್ದೆವಾರು ಹುದ್ದೆಯ ವಿವರಗಳು** ಮತ್ತು ನೇಮಕಾತಿ ಪ್ರಕ್ರಿಯೆಯ ವಿವರವಾದ ಸೂಚನೆಗಳಿಗಾಗಿ ಪ್ರಾಧಿಕಾರದ ವೆಬ್‌ಸೈಟ್ **https://cetonline.karnataka.gov.in/kea/** ಗೆ ಭೇಟಿ ನೀಡಲು ಈ ಮೂಲಕ ಸೂಚಿಸಲಾಗಿದೆ.
- **ಸ್ಪರ್ಧಾತ್ಮಕ ಪರೀಕ್ಷೆ;**
  - a) OMR ಆಧಾರಿತ ಪರೀಕ್ಷೆಯಾಗಿದ್ದು ಒಂದು ಪ್ರಶ್ನೆಗೆ OMR ನಲ್ಲಿ 05 ವೃತ್ತಗಳಿದ್ದು, ಮೊದಲ 04 ವೃತ್ತಗಳು ಒಂದು ಸರಿಯಾದ ಉತ್ತರವನ್ನು ಶೇಡ್ ಮಾಡಲು ಸಂಬಂಧಿಸಿವೆ. ಅಭ್ಯರ್ಥಿಗೆ ಯಾವುದಾದರೂ ಪ್ರಶ್ನೆಗೆ / ಪ್ರಶ್ನೆಗಳಿಗೆ ಉತ್ತರ ತಿಳಿದಿಲ್ಲದಿದ್ದರೆ ಕಡ್ಡಾಯವಾಗಿ 05 ನೇ ವೃತ್ತವನ್ನು ಶೇಡ್ ಮಾಡಬೇಕು. ಇಲ್ಲದಿದ್ದಲ್ಲಿ ¼ ಅಂಕ ಕಡಿತ ಮಾಡಲಾಗುವುದು.
  - b) ಋಣಾತ್ಮಕ ಮೌಲ್ಯಮಾಪನವಿದ್ದು, ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದಂಶದಷ್ಟು (¼) ಅಂಕಗಳನ್ನು ಕಡಿತ ಮಾಡಲಾಗುವುದು.
  - c) ಪರೀಕ್ಷಾ ವೇಳಾಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು.
  - d) ಒಂದೇ ಪಠ್ಯಕ್ರಮವಿರುವ ವಿವಿಧ ಇಲಾಖೆಗಳ ಹುದ್ದೆಗಳಿಗೆ ಒಂದೇ ಪರೀಕ್ಷೆ ನಡೆಸಿ ಸಂಬಂಧಪಟ್ಟ ಇಲಾಖೆಗಳಿಗೆ ಮೆರಿಟ್ ಪಟ್ಟಿ ನೀಡಲಾಗುವುದು.

ಅರ್ಜಿ ಆಹ್ವಾನಿಸಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ ಅಭ್ಯರ್ಥಿಗಳ ಮೆರಿಟ್ ಪಟ್ಟಿಯನ್ನು ಸಂಬಂಧ ಪಟ್ಟ ನೇಮಕಾತಿ ಪ್ರಾಧಿಕಾರಗಳಿಗೆ ನೀಡುವ ಜವಾಬ್ದಾರಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ್ದಾಗಿರುತ್ತದೆ. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ನೀಡಿರುವ ಮಾಹಿತಿಯನುಸಾರ ದಾಖಲೆ ಪರಿಶೀಲಿಸಿ ನಿಯಮಾನುಸಾರ ನೇಮಕಾತಿ ಆದೇಶ ನೀಡುವುದು ಸಂಬಂಧ ಪಟ್ಟ ನೇಮಕಾತಿ ಪ್ರಾಧಿಕಾರದ ಜವಾಬ್ದಾರಿಯಾಗಿರುತ್ತದೆ.

ನೇಮಕಾತಿ ಪ್ರಕ್ರಿಯೆ ಕುರಿತು ಅಭ್ಯರ್ಥಿಗಳಿಗೆ ವೈಯಕ್ತಿಕವಾಗಿ ಮಾಹಿತಿಯನ್ನು ಕಳುಹಿಸುವುದಿಲ್ಲ, ಅಭ್ಯರ್ಥಿಗಳು ಆಗಿಂದಾಗ್ಗೆ ಪ್ರಾಧಿಕಾರದ ವೆಬ್‌ಸೈಟ್ **https://cetonline.karnataka.gov.in/kea/** ಗೆ ಭೇಟಿ ನೀಡುತ್ತಿರಲು ಸೂಚಿಸಿದೆ.

ಸಹಿ/-

**(ಹೆಚ್. ಪ್ರಸನ್ನ ಭಾ.ಆ.ಸೇ.)**

ಕಾರ್ಯನಿರ್ವಾಹಕ ನಿರ್ದೇಶಕರು

ವಾಸಾಸಂಇ/ವಾಪ್ರ/3128/2025-26